ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ:ಸಿ7[2]ಪ್ರಾಶಿಅ.ಹೊ.ಶಾ.ನೋಂ.104/2019-20 ದಿನಾಂಕ:29ನೇ ಜನವರಿ 2020

**: : ಸುತ್ತೋಲೆ : :**

ವಿಷಯ: 2020-21ನೇ ಸಾಲಿನಲ್ಲಿ ಹೊಸದಾಗಿ ಶಾಶ್ವತ ಅನುದಾನರಹಿತ ಪೂರ್ವಪ್ರಾಥಮಿಕ/ ಪ್ರಾಥಮಿಕ/ಪ್ರೌಢಶಾಲೆಗಳನ್ನು ಪ್ರಾರಂಭಿಸಲು ನೋಂದಣಿ ನೀಡುವ ಕುರಿತು.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ:25-11-2019 ಮತ್ತು ದಿನಾಂಕ:21-1-2020

*****

2020-21ನೇ ಶೈಕ್ಷಣಿಕ ಸಾಲಿನಲ್ಲಿ ಖಾಸಗಿ ಅನುದಾನರಹಿತ ಪೂರ್ವ ಪ್ರಾಥಮಿಕ/ಪ್ರಾಥಮಿಕ ಕಿರಿಯ, ಹಿರಿಯ ಹಾಗೂ ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಉದ್ದೇಶಿಸಿರುವ ಸಂಸ್ಥೆಗಳು ಆನ್‌ಲೈನ್ ಮುಖಾಂತರ **ದಿ:23-12-2019 ರಿಂದ ದಿ:23-1-2020ರವರೆಗೆ ಇಲಾಖಾ ವೆಬ್‌ಸೈಟ್‌ನಲ್ಲಿ** [www.schooleducation.kar.nic.in] ಅರ್ಜಿಗಳನ್ನು ಸಲ್ಲಿಸಲು ಈ ಕಛೇರಿ ಸುತ್ತೋಲೆ ದಿನಾಂಕ:25-11-2019ರಲ್ಲಿ ಅವಕಾಶ ಕಲ್ಪಿಸಲಾಗಿತ್ತು. ನಂತರ ಆಡಳಿತಾತ್ಮಕ ದೃಷ್ಟಿಯಿಂದ ಹೊಸ ಶಾಲೆಗಳ ನೊಂದಣಿ ದಿನಾಂಕವನ್ನು **15-02-2020**ರವರೆಗೆ ವಿಸ್ತರಿಸಿರುವ ಬಗ್ಗೆ ದಿನಾಂಕ:21-1-2020ರಂದು ಸುತ್ತೋಲೆ ಹೊರಡಿಸಲಾಗಿದ್ದು ಈ ಕುರಿತಂತೆ ವೇಳಾಪಟ್ಟಿಯನ್ನು ಕೆಳಕಂಡಂತೆ ಪರಿಷ್ಕರಿಸಲಾಗಿದೆ.

ಈಗಾಗಲೇ ಆಡಳಿತ ಮಂಡಳಿಗಳು ಆನ್‌ಲೈನ್ ನಲ್ಲಿ ಸಲ್ಲಿಸಿರುವ ಅರ್ಜಿಗಳನ್ನು ಈ ಕಛೇರಿ ಸುತ್ತೋಲೆ ದಿನಾಂಕ:25-11-2019ರಲ್ಲಿ ನಿಗದಿಪಡಿಸಿರುವ ಮಾನದಂಡಗಳನ್ವಯ ಪರಿಶೀಲಿಸಿ ತಮ್ಮ ಹಂತದಲ್ಲಿ ಕ್ರಮವಹಿಸಬೇಕಾದಲ್ಲಿ ಕೂಡಲೇ ಕ್ರಮವಹಿಸಿ ಮುಂದಿನ ಹಂತಕ್ಕೆ ಕ್ರಮಕೈಗೊಳ್ಳಲು ಕ್ರಮವಹಿಸುವುದು. ಯಾವುದೇ ಕಾರಣಕ್ಕೂ ಅಂತಿಮ ದಿನಾಂಕದವರೆಗೆ ಪರಿಶೀಲಿಸದೆ ವಿಳಂಬ ಮಾಡಬಾರದೆಂದು ಸೂಚಿಸಿದೆ.

**ವಿಶೇಷ ಸೂಚನೆ:- ಹೊಸ ಶಾಲೆಗಳ ನೋಂದಣಿಗಾಗಿ ಆಡಳಿತ ಮಂಡಳಿಗಳಿಂದ ಭೌತಿಕವಾಗಿ ಯಾವುದೇ ದಾಖಲೆಗಳನ್ನು ಪಡೆಯುವಂತಿಲ್ಲ. ಆನ್‌ಲೈನ್ ತಂತ್ರಾಂಶದಲ್ಲಿ ಸಲ್ಲಿಸಿರುವ ಮಾಹಿತಿ/ದಾಖಲೆಗಳ ಆಧಾರದ ಮೇಲೆ ಕ್ರಮವಹಿಸುವುದು.**

| ಕ್ರ.ಸಂ | ವಿಷಯ | ದಿನಾಂಕ | ಪರಿಷ್ಕೃತ ದಿನಾಂಕ |
|---|---|---|---|
| 1 | 1] ಪೂರ್ವ ಪ್ರಾಥಮಿಕ ಶಾಲೆಗಳಿಗೆ ಅನುಮತಿ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಪರಿಶೀಲಿಸಿ ವಿಳಂಬ ಮಾಡದೇ ಅರ್ಜಿಯನ್ನು ನಿಯಮಾನುಸಾರ ಇತ್ಯರ್ಥಪಡಿಸುವುದು.<br>2] ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವಲಯದಲ್ಲಿ ಆನ್‌ಲೈನ್ ಮುಖಾಂತರ ಸಲ್ಲಿಸಿರುವ ಹೊಸ ಶಾಲಾ ಅರ್ಜಿಗಳನ್ನು ಪರಿಶೀಲಿಸಿ ಹೊಸದಾಗಿ ಅಭಿವೃದ್ಧಿಪಡಿಸಿರುವ ತಂತ್ರಾಂಶದಲ್ಲಿ ಸ್ಪಷ್ಟ ಅಭಿಪ್ರಾಯದೊಂದಿಗೆ ಜಿಲ್ಲಾ ಉಪನಿರ್ದೇಶಕರಿಗೆ ಅರ್ಜಿಯನ್ನು ಆನ್‌ಲೈನ್ ತಂತ್ರಾಂಶದಲ್ಲಿ ಸಲ್ಲಿಸುವುದು. | 07-02-2020 | 29-02-2020 |
| 2 | 1] ಹೊಸ ಶಾಲಾ ಅರ್ಜಿಗಳಲ್ಲಿ ತಮ್ಮ ಹಂತದಲ್ಲೇ ನೋಂದಣಿ ನೀಡುವಂತಹ [1ರಿಂದ5, 6 ರಿಂದ8, 1ರಿಂದ8] ರವರೆಗಿನ ಶಾಲೆಗಳ ನೋಂದಣಿಯನ್ನು ತ್ರಿ ಸದಸ್ಯ ಸಮಿತಿಯ ವರದಿಯನ್ನು ಪಡೆದು ಅರ್ಜಿಗಳನ್ನು ವಿಳಂಬ ಮಾಡದೇ ನಿಯಮಾನುಸಾರ ಇತ್ಯರ್ಥಪಡಿಸುವುದು.<br>2] ಉಪನಿರ್ದೇಶಕರು ತಮ್ಮ ಜಿಲ್ಲೆಯಲ್ಲಿ 1 ರಿಂದ 10 ಮತ್ತು 9 ರಿಂದ 10 ರವರೆಗಿನ ಶಾಲೆಗಳನ್ನು ಪ್ರಾರಂಭಿಸಲು ಸಲ್ಲಿಸಿರುವ ಅರ್ಜಿಗಳನ್ನು ಪರಿಶೀಲಿಸಿ ತ್ರಿ ಸದಸ್ಯರ ಸಮಿತಿಯ ವರದಿಯೊಂದಿಗೆ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಳಂಬ ಮಾಡದೇ ಇತ್ಯರ್ಥಪಡಿಸಲು ಆಯುಕ್ತಾಲಯಕ್ಕೆ ಸಲ್ಲಿಸುವುದು. | 25-02-2020 | 11-03-2020 |
| 3 | ಉಪನಿರ್ದೇಶಕರಿಂದ ಆನ್‌ಲೈನ್ ಮುಖಾಂತರ ಸ್ವೀಕೃತಿಯಾದ ಅರ್ಜಿಗಳನ್ನು ನಿರ್ದೇಶಕರು [ಪ್ರೌಢಶಿಕ್ಷಣ] ರವರು ಪರಿಶೀಲಿಸಿ ಮಾನ್ಯ ಆಯುಕ್ತರ ಅನುಮೋದನೆ ಪಡೆದು ನಿಯಮಾನುಸಾರ ಇತ್ಯರ್ಥಪಡಿಸುವುದು. | 25-03-2020 | 26-03-2020 |

ಈ ಬಗ್ಗೆ ಈಗಾಗಲೇ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಮುಂದಿನ ಕ್ರಮಕೈಗೊಳ್ಳಲು ಈ ಕಛೇರಿಯ ಎಸ್.ಎ.ಟಿ.ಸ್ ವಿಭಾಗವು ತಕ್ಷಣ ಕ್ರಮಕೈಗೊಂಡು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಿಂದ ರಾಜ್ಯ ಹಂತದವರೆಗೆ ಪರಿಶೀಲಿಸಿ ಕ್ರಮಕೈಗೊಳ್ಳಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲು ಸೂಚಿಸಿದೆ.

[ಡಾ:ಕೆ.ಜಿ.ಜಗದೀಶ ಭಾ.ಆ.ಸೇ]
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು[ಆಡಳಿತ] ರವರಿಗೆ
2. ರಾಜ್ಯದ ಎಲ್ಲಾ ತಾಲ್ಲೂಕು/ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ

**ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:-**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ ಮತ್ತು ಧಾರವಾಡ ಇವರಿಗೆ ಕಳುಹಿಸುತ್ತಾ ನಿಯಮಾನುಸಾರ ಕ್ರಮವಹಿಸಲು ತಿಳಿಸಿದೆ.
2. ಕಾರ್ಯಕ್ರಮಾಧಿಕಾರಿಗಳು, ಎಸ್.ಎ.ಟಿ.ಎಸ್ ವಿಭಾಗ, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು.
3. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಬೆಂಗಳೂರು
4. ಪ್ರೋಗ್ರಾಮರ್, ಸಾಫ್ಟ್‌ವೇರ್ ಡೆವಲಪ್ ಮೆಂಟ್ ಸೆಂಟರ್, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು
5. ಕಛೇರಿ ಪ್ರತಿ.